ಆ) ಆಫೆಡಾ ಸಂಸ್ಥೆಯು ಮಾವಿನ ಹಣ್ಣುಗಳನ್ನು ವಿದೇಶಕ್ಕೆ ರಫ್ತು ಮಾಡಲು ಮಲೇಶಿಯಾದ ಕೌಲಾಲಂಪುರದಲ್ಲಿ ದಿನಾಂಕ ೨೮-೭-೧೯೮೯ ರಿಂದ ೩-೮-೧೯೮೯ರ ವರೆಗೆ "ಫ್ಲೋವರ್ ಆಫ್ ಇಂಡಿಯಾ" ಫೆಸ್ಟಿವಲ್ ಅನ್ನು ಆಚರಿಸಿತು. ಇದರಲ್ಲಿ ತೋಟದ ಬೆಳೆಗಾರರ ಸಹಕಾರಿ ಮಾರಾಟ ಮತ್ತು ಸಂಸ್ಕರಣ ಸಂಘದವರು ಭಾಗವಹಿಸಿದ್ದರು.

ಆಫೆಡಾ ಸಂಸ್ಥೆಯು ದಿನಾಂಕ ೩-೫-೯೦ ರಿಂದ ೧೮-೫-೯೦ರ ವರೆಗೆ ಪಶ್ಚಿಮ ಯುರೋಪಿನ ದೇಶದಲ್ಲಿ ಏರ್ಪಡಿಸಿದ್ದ ಮಾರುವವರ ಮತ್ತು ಕೊಳ್ಳುವವರ ಕೂಟಕ್ಕೆ ತೋಟದ ಬೆಳೆಗಾರರ ಸಹಕಾರಿ ಮಾರಾಟ ವ್ಯಾತ್ತು ಸಂಸ್ಕರಣ ಸಂಘವು ನಾಲ್ಕು ಜಾತಿಯ ೮೫೦ ಕೆ.ಜಿ. ಮಾವಿನ ಹಣ್ಣುಗಳನ್ನು ಕಳುಹಿಸಿದೆ. ಈ ಬಗ್ಗೆ ಮುಂದಿನ ಬೆಳವಣಿಗೆಯನ್ನು ನಿರೀಕ್ಷಿಸಲಾಗುತ್ತಿದೆ

ಶಾಲಾ ಮಕ್ಕಳಿಗೆ ಸಮವಸ್ತ್ರಗಳ ವಿತರಣೆ

೮೮ ಶ್ರೀ ಎ.ಟಿ. ರಾಮಸ್ವಾಮಿ(ಆರಕಲಗೂಡು).—ಪ್ರಾಥಮಿಕ ಶಿಕ್ಷಣ, ಯುವಜನ ವ್ಯವಹಾರಗಳ ಕ್ರೀಡೆಗಳು, ಕನ್ನಡ ಹಾಗೂ ಸಂಸ್ಕೃತಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಶಾಲಾ ಮಕ್ಕಳಿಗೆ ಸಮವಸ್ತ್ರಗಳನ್ನು ವಿತರಿಸುತ್ತಿರುವುದರಿಂದ ಮಕ್ಕಳಿಗೆ ಹೆಚ್ಚು ಪ್ರಯೋಜನವಾಗುತ್ತಿಲ್ಲವೆಂಬುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಆ) ಹಾಗಿದ್ದಲ್ಲಿ ಅದನ್ನು ಜಾರಿಗೊಳಿಸದಿರಲು ಸರ್ಕಾರವವರು ತೆಗೆದುಕೊಂಡ ಕ್ರಮಗಳೇನು ?

ಶ್ರೀ ಕೆ. ಹೆಚ್. ರಂಗನಾಥ(ಶಿಕ್ಷಣ, ಯುವಜನ ವ್ಯವಹಾರಗಳು, ಕ್ರೀಡೆಗಳು, ಕನ್ನಡ ಹಾಗೂ ಸಂಸ್ಕೃತಿ ಮಂತ್ರಿಗಳು).—

ಅ) ಇಲ್ಲ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ರಾಜಾಜಿನಗರದ ವಿದ್ಯಾ ಸಂಸ್ಥೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳು

೪೦ ಶ್ರೀ ಕೆ. ಲಕ್ಕಣ್ಣ (ರಾಜಾಜಿನಗರ) .—ಪ್ರಾಥಮಿಕ ಶಿಕ್ಷಣ, ಯುವಜನ ವ್ಯವಹಾರಗಳು, ಕ್ರೀಡೆಗಳು, ಕನ್ನಡ ಮತ್ತು ಸಂಸ್ಕೃತಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬೆಂಗಳೂರು ರಾಜಾಜಿನಗರ ವ್ಯಾಪ್ತಿಯಲ್ಲಿ ಬರುವ ಸರಕಾರದ ಪ್ರಾಥಮಿಕ ಶಾಲೆ ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು ?

ಆ) ಮೇಲಿನ ಶಾಲೆ ಹಾಗೂ ಕಾಲೇಜುಗಳಲ್ಲಿ ಖಾಲಿ ಇರುವ ಉಪಾಧ್ಯಾಯರುಗಳ ಸಂಖ್ಯೆ ಎಷ್ಟು ? ಹಾಗೂ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಳ್ಳಲಿರುವ ಕ್ರಮಗಳೇನು ?

ಶ್ರೀ ಕೆ. ಹೆಚ್. ರಂಗನಾಥ್ (ಶಿಕ್ಷಣ ಮಂತ್ರಿಗಳು).—

ಅ)	ಪದವಿ ಪೂರ್ವ ಕಾಲೇಜುಗಳು ಇರುವುದಿಲ್ಲ	ಪ್ರೌಢಶಾಲೆಗಳ ಸಂಖ್ಯೆ ೪	ಪ್ರಾಥಮಿಕ ಶಾಲೆಗಳ ಸಂಖ್ಯೆ ೧೦
ಆ)	ಪ್ರಶ್ನೆ ಉದ್ಭವಿಸುವುದಿಲ್ಲ.	ಸರ್ಕಾರಿ ಪ್ರೌಢ ಶಾಲೆಗಳಲ್ಲಿ ೨ ಶಿಕ್ಷಕರ ಹುದ್ದೆಗಳು ಖಾಲಿ ಇದ್ದು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.	ಯಾವುದೇ ಹುದ್ದೆ ಖಾಲಿ ಇರುವುದಿಲ್ಲ.